# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಕೆಂಪೇಗೌಡ ವಾರ್ಡ್ ನಂ-01ರಲ್ಲಿ ದಿನಾಂಕ: 16-01-2020 ರಂದು ನಡೆದ ಸಮಿತಿ ಸಭಾ ನಡವಳಿ.

ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.

1. ಶ್ರೀ.ರಜನಿಕಾಂತ್ ಮಲ್ಲಿ, ಅಧ್ಯಕ್ಷರು ಹಾಗೂ ನೊಡಲ್ ಅಧಿಕಾರಿಗಳು.
2. ಶ್ರೀ.ಮಲ್ಲಿನಾಥ ಮಲ್ಕಾಪುರ, ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ.ಸುಂದರೇಶ್ ಸಹಾಯಕ ಅಭಿಯಂತರರು ಯೋಜನೆ.
4. ಶ್ರೀ.ಬಾಬು ರೆಡ್ಡಿ ಸಹಾಯಕ ಅಭಿಯಂತರರು ವಿದ್ಯುತ್
5. ಶ್ರೀ. ವೆಂಕಟೇಶ್ ಮೂರ್ತಿ, ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಸದಸ್ಯರು,
6. ಶ್ರೀ.ವಿವೇಕ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ-01.

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ಅಧ್ಯಕ್ಷರನ್ನು ಕೋರಲಾಯಿತು.

| ಕ್ರ.ಸಂ | ವಿಷಯ ಸೂಚಿ | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 01 | ವಾರ್ಡ್ ನಂ -01ರ ವ್ಯಾಪ್ತಿಯಲ್ಲಿ ನೆಹರು ನಗರದಲ್ಲಿರುವ ಸಾಯಿ ಗೋಲ್ಡ್ ಪ್ಯಾಲೇಸ್ ಹತ್ತಿರ ಬ್ಲಾಕ್ ಸ್ಪಾಟ್ ತೆರವುಗೊಳಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. | ಹಿರಿಯ ಆರೋಗ್ಯ ಪರಿವೀಕ್ಷಕರು (ವಾರ್ಡ್ ನಂ-01) | ಆರೋಗ್ಯ ವೈದ್ಯಾಧಿಕಾರಿಗಳು (ಯಲಹಂಕ ವಲಯ) |
| 02 | ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ವೆಂಕಟಾಲ ಗ್ರಾಮದಲ್ಲಿ ಹೊಸದಾಗಿ ಬೊರ್‌ವೆಲ್ ಕೋರೆದು ನೀರು ಪೂರೈಸಬೇಕೆಂದು ಹಾಗೂ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯಿಂದ ಹಾಲಿ ಇರುವ ಸಂಪರ್ಕವನ್ನು ಕಡಿತಗೊಳಿಸಲಾಗಿದ್ದು, ಸಾರ್ವಜನಿಕರಿಗೆ ತೊಂದರೆ ಉಂಟಾಗುತ್ತಿರುವ ಬಗ್ಗೆ | ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸೂಚಿಸುವಂತೆ ನೊಡೆಲ್ ಅಧಿಕಾರಿಗಳು ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ) |
| 03 | ವಾರ್ಡ್ ನಂ-01ರ ವ್ಯಾಪ್ತಿಯಲ್ಲಿರುವ ವೆಂಕಟಾಲ ಗ್ರಾಮದಲ್ಲಿ ಹೊಸದಾಗಿ ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಾಣ ಮಾಡಿದ್ದು, ಮಾನ್ಯ ಶಾಸಕರು ಯಲಹಂಕ ವಿಧಾನ ಸಭಾ ಕ್ಷೇತ್ರರವರು ಉದ್ಘಾಟನೆ ಮಾಡಿರುತ್ತಾರೆ. ಆದರೆ ಈ ಆರ್.ಒ ಪ್ಲಾಂಟ್‌ಗೆ ಬೋರ್‌ವೆಲ್‌ನಿಂದ ನೀರಿನ ಸಂಪರ್ಕ ನೀಡಿರುವುದಿಲ್ಲ. ಇದರ ಬಗ್ಗೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳ ವಿರುದ್ಧ ಸಾರ್ವಜನಿಕರು ಆಕ್ಷೇಪಣೆ ಸಲ್ಲಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸೂಚಿಸುವಂತೆ ನೊಡೆಲ್ ಅಧಿಕಾರಿಗಳು ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ) |

| | | | |
|---|---|---|---|
| 03 | ವಾರ್ಡ್ ನಂ-01ರ ವ್ಯಾಪ್ತಿಯಲ್ಲಿ ಹಾಲಿ ಇರುವ ಬೋರ್‌ವೆಲ್‌ಗಳಲ್ಲಿ ರಾತ್ರೋ ರಾತ್ರಿ ಪಂಪ್ ಮೋಟಾರ್ ತೆಗೆಯುತ್ತಿರುವ ಬಗ್ಗೆ ಸ್ಥಳೀಯ ನಿವಾಸಿಗಳು ಅಕ್ಷೇಪಣೆ ವ್ಯಕ್ತಪಡಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸೂಚಿಸುವಂತೆ ನೋಡೆಲ್ ಅಧಿಕಾರಿಗಳು ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ) |
| 04 | ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ವೆಂಕಟಾಲ ಲೇಕ್ ವೀಹ್ ಬಡಾವಣೆ ಬೀದಿ ದೀಪಗಳು ಉರಿಯುತ್ತಿರುವುದಿಲ್ಲ. ಹಾಗೂ ಎರಡು ಕಂಪನಿಯವರಿಗೆ ಗುತ್ತಿಗೆ ನೀಡಿರುವುದರಿಂದ ಬೀದಿ ದೀಪಗಳ ನಿರ್ವಹಣೆ ಸರಿಯಾಗಿ ನಿರ್ವಹಿಸುತ್ತಿರುವುದಿಲ್ಲ ಎಂದು ಸ್ಥಳೀಯರು ಸಭೆಯಲ್ಲಿ ದೂರನ್ನು ಸಲ್ಲಿಸಿದರು. | ಶ್ರೀ.ಬಾಬುರೆಡ್ಡಿ ಸಹಾಯಕ ಅಭಿಯಂತರರು ವಿದ್ಯುತ್ ರವರಿಗೆ ಸಾರ್ವಜನಿಕರ ದೂರುಗಳನ್ನು ಸರಿಪಡಿಸುವಂತೆ ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು. | ಶ್ರೀ.ಬಾಬುರೆಡ್ಡಿ, ಸಹಾಯಕ ಅಭಿಯಂತರರು ವಿದ್ಯುತ್ |
| 05 | ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯವರು ಸಾರ್ವಜನಿಕರಿಗೆ ಕುಡಿಯುವ ನೀರನ್ನು ಸಮರ್ಪಕವಾಗಿ ಪೂರೈಸದೆ ಇದ್ದಲ್ಲಿ ಧರಣಿ ಮಾಡುವುದಾಗಿ ವೆಂಕಟಾಲ ಗ್ರಾಮದ ಸಾರ್ವಜನಿಕರು ದೂರನ್ನು ಸಲ್ಲಿಸಿದರು. | ಬಿ.ಡಬ್ಲ್ಯೂ.ಎಸ್.ಎಸ್.ಬಿ ಅಧಿಕಾರಿಗಳಿಗೆ ಸೂಚಿಸುವಂತೆ ನೋಡೆಲ್ ಅಧಿಕಾರಿಗಳು ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ) |
| 06 | ಯಲಹಂಕ ಸರ್ಕಾರಿ ಆಸ್ಪತ್ರೆ ಮುಂಭಾಗ ಹಾಗೂ ಕಾಂಪೌಂಡ್ ಹತ್ತಿರ ಕಸ ವಿಲೇವಾರಿಯು ಸಮರ್ಪಕವಾಗಿ ಮಾಡುತ್ತಿರುವುದಿಲ್ಲ ಎಂದು ಸಾರ್ವಜನಿಕರು ಸಭೆಯಲ್ಲಿ ಅಕ್ಷೇಪಿಸಿದರು. | ಶ್ರೀ. ವಿವೇಕ್ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸದರಿ ದೂರುಗಳನ್ನು ಸರಿಪಡಿಸುವಂತೆ ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು | ಕಿರಿಯ ಆರೋಗ್ಯ ಪರಿವೀಕ್ಷಕರು (ವಾರ್ಡ್-1) |
| 07 | ಯಲಹಂಕ ಓಲ್ಡ್ ಟೌನ್‌ನಲ್ಲಿರುವ ಕೆಂಪೇಗೌಡ ಪ್ರತಿಮೆ ಹತ್ತಿರ ಕೆಲವು ದುಷ್ಕರ್ಮಿಗಳು ಕುಡಿದು ಬಾಟಲುಗಳನ್ನು ಒಳಭಾಗದಲ್ಲಿ ಎಸೆದಿರುವುದನ್ನು ಸಭೆಯಲ್ಲಿ ದೂರು ಸಲ್ಲಿಸಿದರು. ಹಾಗೂ ಕೆಂಪೇಗೌಡ ಪ್ರತಿಮೆ ಸುತ್ತಲೂ ವಿಧಾನ ಸೌದ ಗ್ರೀಲ್ ಅಳವಡಿಸಲು ಕೋರಿದರು. | ಶ್ರೀ. ವಿವೇಕ್ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸದರಿ ಜಾಗದಲ್ಲಿ ಸ್ವಚ್ಛಗೊಳಿಸಲು ಕ್ರಮ ವಹಿಸುವಂತೆ ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು | ಕಿರಿಯ ಆರೋಗ್ಯ ಪರಿವೀಕ್ಷಕರು (ವಾರ್ಡ್-1) |
| 08 | ಯಲಹಂಕ ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ಕೆ.ಹೆಚ್.ಬಿ ಕಾಲೋನಿಯಲ್ಲಿ ಬೀದಿ ದೀಪಗಳು ಉರಿಯುತ್ತಿರುವುದಿಲ್ಲ ಎಂದು ಸ್ಥಳಿಯರಾದ ಶ್ರೀ.ಅ.ಬ.ಶಿವಕುಮಾರ್ ರವರು ಸಭೆಗೆ ದೂರನ್ನು ಸಲ್ಲಿಸಿದರು. | ಶ್ರೀ.ಬಾಬುರೆಡ್ಡಿ ಸಹಾಯಕ ಅಭಿಯಂತರರು ವಿದ್ಯುತ್ ರವರಿಗೆ ಸಾರ್ವಜನಿಕರ ದೂರುಗಳನ್ನು ಸರಿಪಡಿಸುವಂತೆ ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು. | ಶ್ರೀ.ಬಾಬುರೆಡ್ಡಿ, ಸಹಾಯಕ ಅಭಿಯಂತರರು ವಿದ್ಯುತ್ |
| 09 | ಯಲಹಂಕ ಓಲ್ಡ್ ಟೌನ್‌ನ ಲೇಕ್ ವೀವ್ ಬಡಾವಣೆ ಮತ್ತು ಜಯಮುನಿ ಬಡಾವಣೆಯಲ್ಲಿರುವ ಸೈಟ್ ನಂ 6 ಮತ್ತು 7ರಲ್ಲಿ ಪೇಯಿಂಗ್ ಗೇಸ್ಟ್ ನಿರ್ಮಾಣ ಮಾಡುತ್ತಿದ್ದು, ಕೂಡಲೇ ಸ್ಥಗಿತಗೊಳಿಸುವಂತೆ ಜಯಮುನಿ ನಗರದ ಅಸೋಸಿಯೆಷನ್ ರವರಾದ ಶ್ರೀ.ಪರಂದಾಮು ನಾಯುಡು ರವರು ದೂರನ್ನು ಸಲ್ಲಿಸಿದರು. | ದೂರನ್ನು ಸ್ವೀಕರಿಸಿ ನಿರ್ಮಿಸುತ್ತಿರುವ ಕಟ್ಟಡವನ್ನು ಸ್ಥಗೀತಗೊಳಿಸುವಂತೆ ಸಂಬಂದಿಸಿದ ಸಹಾಯಕ ಅಭಿಯಂತರರು ವಾರ್ಡ್ ನಂ-01 ರವರಿಗೆ ನೋಡೆಲ್ ಅಧಿಕಾರಿಗಳು ಸೂಚಿಸಿದರು. | ಸಹಾಯಕ ಅಭಿಯಂತರರು (ವಾರ್ಡ್ -1) |

| | | | |
|---|---|---|---|
| 10 | ವಾರ್ಡ್ ನಂ -01ರ ವ್ಯಾಪ್ತಿಯಲ್ಲಿರುವ ವೆಂಕಟಾಲ ಗ್ರಾಮದಲ್ಲಿ ಸರ್ವಿಸ್ ರಸ್ತೆಯಲ್ಲಿರುವ ಬ್ಲಾಕ್ ಸ್ಪಾಟ್‌ಗಳನ್ನು ಸ್ವಚ್ಛಗೊಳಿಸುವಂತೆ ಸಭೆಯಲ್ಲಿ ವೆಂಕಟಾಲ ಗ್ರಾಮಸ್ಥರು ಕೋರಿದರು. | ಶ್ರೀ. ವಿವೇಕ್ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸದರಿ ಜಾಗದಲ್ಲಿ ಸ್ವಚ್ಛಗೊಳಿಸಲು ಕ್ರಮ ವಹಿಸುವಂತೆ ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು | ಹಿರಿಯ ಆರೋಗ್ಯ ಪರಿವೀಕ್ಷಕರು (ವಾರ್ಡ್-1) |

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ಅಧ್ಯಕ್ಷರು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಡ)

ವಾರ್ಡ್ ಸಮಿತಿ ಅಧ್ಯಕ್ಷರು
ಹಾಗೂ ವಾರ್ಡ್‌ನ ನೋಡೆಲ್ ಅಧಿಕಾರಿಗಳು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಡ)

ಪ್ರತಿಯನ್ನು:
ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳ ಮಾಹಿತಿಗಾಗಿ.

1. ಶ್ರೀ.ರಜನಿಕಾಂತ್ ಮಲ್ಲಿ, ಅಧ್ಯಕ್ಷರು ಹಾಗೂ ನೊಡಲ್ ಅಧಿಕಾರಿಗಳು.

ಅಧಿಕಾರಿಗಳ ಮಾಹಿತಿಗಾಗಿ.

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂಕ್ತ ಕ್ರಮಕ್ಕಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.